ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	706
ಸದಸ್ಯರ ಹೆಸರು	:	ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	25-09-2020.
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಸ್ವಂತ ಕಟ್ಟಡಗಳಿಲ್ಲದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)</td><td>ಚಿತ್ರದುರ್ಗ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ 189 ಗ್ರಾಮ ಪಂಚಾಯತಿಗಳ ಪೈಕಿ 7 ಗ್ರಾಮ ಪಂಚಾಯತಿಗಳಿಗೆ ಸ್ವಂತ ಕಟ್ಟಡ ಇರುವುದಿಲ್ಲ.

ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.

<table>
<tr><th>ಜಿಲ್ಲೆ</th><th>ತಾಲ್ಲೂಕು</th><th>ಗ್ರಾ. ಪಂ. ಒಟ್ಟು ಸಂಖ್ಯೆ</th><th>ಸ್ವಂತ ಕಟ್ಟಡಗಳಲ್ಲಿದ ಗ್ರಾ.ಪಂ. ಗಳ ಸಂಖ್ಯೆ</th></tr>
<tr><td>ಚಿತ್ರದುರ್ಗ</td><td>ಚಿತ್ರದುರ್ಗ</td><td>38</td><td>03</td></tr>
<tr><td></td><td>ಹಿರಿಯೂರು</td><td>33</td><td>04</td></tr>
<tr><td></td><td>ಚಳ್ಳಕೆರೆ</td><td>40</td><td>0</td></tr>
<tr><td></td><td>ಹೊಳಲ್ಕೆರೆ</td><td>29</td><td>0</td></tr>
<tr><td></td><td>ಹೊಸದುರ್ಗ</td><td>33</td><td>0</td></tr>
<tr><td></td><td>ಮೊಳಕಾಲ್ಮೂರು</td><td>16</td><td>0</td></tr>
<tr><td colspan="2">ಒಟ್ಟು</td><td>189</td><td>07</td></tr>
</table>

ದಾವಣಗೆರೆ ಜಿಲ್ಲೆಯ ಎಲ್ಲಾ 196 ಗ್ರಾಮ ಪಂಚಾಯತಿಗಳು ಸ್ವಂತ ಕಟ್ಟಡವನ್ನು ಹೊಂದಿರುತ್ತವೆ.</td></tr>
<tr><td>(ಆ)</td><td>ಈ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ಒದಗಿಸುವುದು)</td><td>ಹೊಸದಾಗಿ ರಚನೆಯಾದ ಗ್ರಾಮ ಪಂಚಾಯತಿ ಕಛೇರಿ ಕಟ್ಟಡಗಳನ್ನು ರೂ 40.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕಟ್ಟಡಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದ್ದು ಈ ಪೈಕಿ ಸರ್ಕಾರದ ಅನುದಾನ ರೂ.20.00 ಲಕ್ಷ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಲ್ಲಿ ಕೈಗೊಳ್ಳುವ ರಾಜೀವ ಗಾಂಧಿ ಸೇವಾ ಕೇಂದ್ರ ನಿರ್ಮಾಣ ಮಾಡಲು ಮೀಸಲಿಟ್ಟಿರುವ ಅನುದಾನ ರೂ.16.25 ಲಕ್ಷ ಹಾಗೂ 14ನೇ ಹಣಕಾಸು ಯೋಜನೆ ಅಥವಾ ಗ್ರಾಮ ಪಂಚಾಯತಿಗಳ ಇನ್ನಿತರೆ ಅನುದಾನದಡಿ ಉಳಿಕೆಯಾಗಿರುವ ರೂ.3.75 ಲಕ್ಷಗಳನ್ನು ಬಳಸಿಕೊಳ್ಳಲು ನಿರ್ಧರಿಸಲಾಗಿರುತ್ತದೆ.

ನೂತನವಾಗಿ ರಚನೆಯಾದ 461 ಗ್ರಾಮ ಪಂಚಾಯತಿಗಳ ಪೈಕಿ 361 ಗ್ರಾಮ ಪಂಚಾಯತಿಗಳ ಆಡಳಿತ ವ್ಯವಸ್ಥೆಗೆ ಅನುಕೂಲವಾಗುವಂತೆ ಕಟ್ಟಡ ಮುಂತಾದ ಮೂಲ ಸೌಕರ್ಯಗಳನ್ನು ಕಲ್ಪಿಸಲು ತಲಾ 1 ಗ್ರಾಮ ಪಂಚಾಯತಿಗೆ ರೂ.10.00 ಲಕ್ಷದಂತೆ ಒಟ್ಟು ರೂ.36.10 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.</td></tr>
</table>

ಸಂ. ಗ್ರಾಅಪ 727 ಗ್ರಾಪಂಅ 2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಗ್ರಾಮೀಣಾಭಿವೃದ್ಧಿ ಮತ್ತು